# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ331 /2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 22/03/2021

**ವಿಷಯ:-** ದಿನಾಂಕ. 20.03.2021ರಂದು ನಡೆದ ವಾರ್ಡ್ ಸಂಖ್ಯೆ. 120ರ ಸಮಿತಿ ಸಭೆಯ ನಡವಳಿಗಳು.

**ಉಲ್ಲೇಖ:-** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21, ದಿ. 21.09.2020.

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮುನಿಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.

2. ವಾರ್ಡಿನಲ್ಲಿ ರಸ್ತೆ ಬದಿಯಲ್ಲಿರುವ ಹಸಿ ಕಸ ಮತ್ತು ಒಣ ಕಸಗಳನ್ನು ತೆರವುಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

3. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಚರಂಡಿ ಹೂಳನ್ನು ತೆಗೆದು ಸದರಿ ಹೂಳನ್ನು ಶೀಘ್ರವೇ ವಿಲೇವಾರಿ ಮಾಡುವುದಾಗಿ ಅಧಿಕಾರಿಗಳಿಗೆ ಸೂಚಿಸಲಾಯಿತು.

4. ವಾರ್ಡಿನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಚರಂಡಿ ಹೂಳನ್ನು ತೆಗೆದು ರೋಡಿಗೆ ಎಸೆದು ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟುಮಾಡುತ್ತಿದ್ದಾರೆ ಹಾಗಾಗಿ ಸದರಿ ಹೂಳನ್ನು ಒಣಗಿದ ನಂತರ ಶೀಘ್ರವೇ ವಿಲೇವಾರಿ ಮಾಡುವುದಾಗಿ ಅಧಿಕಾರಿಗಳಿಗೆ ಸೂಚಿಸಲಾಯಿತು.

5. ವಾರ್ಡಿನ ಕೆಲವು ರಸ್ತೆಗಳು ದುರಸ್ಥಿಗೊಂಡಿದ್ದು, ಸದರಿ ರಸ್ತೆಯ ಗುಂಡಿಗಳನ್ನು ಶೀಘ್ರವೇ ತುಂಬಲು ಅಧಿಕಾರಿಗಳಿಗೆ ಸೂಚಿಸಲಾಯಿತು.

6. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಸೊಳ್ಳೆಯ ಔಷಧಿ ಸಿಂಪಡಣೆ ಕಾರ್ಯಗಳನ್ನು ಸಮರ್ಪಕವಾಗಿ ಕೈಗೊಳ್ಳುವ ಬಗ್ಗೆ ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

7. ವಾರ್ಡಿನಲ್ಲಿ ದುರಸ್ಥಿಗೊಂಡಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

Scanned with CamScanner

8. ಬೇಸಿಗೆ ಕಾಲವಾದ್ದರಿಂದ ಕುಡಿಯುವ ನೀರಿನ ಅಭಾವ ಇರುವುದರಿಂದ ಬೋರ್‌ವೆಲ್ ಕೊರೆಸುವ ಕಾಮಗಾರಿಯನ್ನು ಕೈಗೊಂಡು ಕುಡಿಯುವ ನೀರನ್ನು ಸಾರ್ವಜನಿಕರಿಗೆ ಒದಗಿಸುವಂತೆ ಚರ್ಚಿಸಲಾಯಿತು.

9. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ, ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

<u>ನಿರ್ಣಯ:-</u>

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತ್ತು.

(ಸಹಿ)
ಕಾರ್ಯದರ್ಶಿ
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

K. Lakshmi
ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು :

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಅಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಅಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾಟನ್‌ಪೇಟೆ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.

Scanned with CamScanner